**All India Radio: Bangalore**
**National Bulletin In Kannada**
**06.03.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**06.03.2026 1.10 p.m.**

**<><><><>**

ಮುಖ್ಯಾಂಶಗಳು

1. ಕೃಷಿ ಭಾರತದ ಆರ್ಥಿಕತೆಯ ಬೆನ್ನೆಲುಬು - ಪ್ರಧಾನಿ ನರೇಂದ್ರ ಮೋದಿ ಅಭಿಮತ
2. ೪.೪೮ ಲಕ್ಷ ಕೋಟಿ ರೂಪಾಯಿ ಗಾತ್ರದ ಬಜೆಟ್ ಮಂಡಿಸಿದ ಕರ್ನಾಟಕ ಮುಖ್ಯಮಂತ್ರಿ ಸಿದ್ದರಾಮಯ್ಯ; ಖಾಲಿ ಹುದ್ದೆಗಳ ಭರ್ತಿಗೆ ಆದ್ಯತೆ
3. ರಾಜತಾಂತ್ರಿಕ ಸಂಬಂಧಗಳ ಪುನರ್ ಸ್ಥಾಪನೆಗೆ ಅಮೆರಿಕ - ವೆನಿಜುವೆಲಾ ಪರಸ್ಪರ ಒಪ್ಪಿಗೆ
4. ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್; ಪುರುಷರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿಂದು ಲಕ್ಷ್ಯ ಸೇನ್ - ಲಿ ಶಿ ಫೆಂಗ್ ಮುಖಾಮುಖಿ

<><><><>

ಕೃಷಿ ಭಾರತದ ಆರ್ಥಿಕತೆಯ ಬೆನ್ನೆಲುಬಾಗಿದ್ದು, ದೇಶದ ದೀರ್ಘಕಾಲೀನ ಅಭಿವೃದ್ಧಿ ಪಯಣಕ್ಕೆ ಕಾರ್ಯತಂತ್ರದ ಆಧಾರಸ್ತಂಭವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಕೃಷಿ ಮತ್ತು ಗ್ರಾಮೀಣ ಪರಿವರ್ತನೆ ಎಂಬ ವಿಷಯದ ಕುರಿತು ಬಜೆಟ್ ನಂತರದ ವೆಬಿನಾರ್ ಉದ್ದೇಶಿಸಿ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಅವರು ಮಾತನಾಡಿದರು. ಕೃಷಿ ವಲಯವನ್ನು ಬಲಪಡಿಸಲು ಕೇಂದ್ರ ಸರ್ಕಾರ ನಿರಂತರವಾಗಿ ಹಲವಾರು ಕ್ರಮಗಳನ್ನು ತೆಗೆದುಕೊಂಡಿದೆ. ಈ ವರ್ಷದ ಕೇಂದ್ರ ಬಜೆಟ್ ಕೃಷಿ ಮತ್ತು ಗ್ರಾಮೀಣ ಪರಿವರ್ತನೆಗೆ ಬಲವಾದ ಉತ್ತೇಜನ ನೀಡುತ್ತಿದೆ. ಪ್ರಸ್ತುತ ಭಾರತ ಆಹಾರ ಧಾನ್ಯಗಳು, ದ್ವಿದಳ ಧಾನ್ಯಗಳು ಮತ್ತು ಎಣ್ಣೆ ಬೀಜಗಳಲ್ಲಿ ದಾಖಲೆಯ ಉತ್ಪಾದನೆ ಕಾಣುತ್ತಿದೆ ಎಂದು ಅವರು ತಿಳಿಸಿದರು. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಅಡಿಯಲ್ಲಿ ಸುಮಾರು ಹತ್ತು ಕೋಟಿ ರೈತರು ೪ ಲಕ್ಷ ಕೋಟಿ ರೂಪಾಯಿಗಳಿಗಿಂತ ಹೆಚ್ಚಿನ ಆರ್ಥಿಕ ನೆರವು ಪಡೆದಿದ್ದಾರೆ. ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯಡಿಯಲ್ಲಿ ಸುಮಾರು ೨ ಲಕ್ಷ

ಕೋಟಿ ರೂಪಾಯಿಗಳನ್ನು ವಿತರಿಸಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಮಾಹಿತಿ ನೀಡಿದರು.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದಿನಿಂದ ಎರಡು ದಿನಗಳ ಕಾಲ ಪಶ್ಚಿಮ ಬಂಗಾಳಕ್ಕೆ ಭೇಟಿ ನೀಡಲಿದ್ದಾರೆ. ವಂದೇ ಮಾತರಂನ ೧೫೦ನೇ ವಾರ್ಷಿಕೋತ್ಸವದ ಅಂಗವಾಗಿ ರಾಷ್ಟ್ರಪತಿಗಳು ಇಂದು ಡಾರ್ಜಿಲಿಂಗ್ ಬೆಟ್ಟ ಉತ್ಸವಕ್ಕೆ ಚಾಲನೆ ನೀಡಲಿದ್ದಾರೆ ಮತ್ತು ಡಾರ್ಜಿಲಿಂಗ್‌ನ ಲೋಕ ಭವನದಲ್ಲಿ ಸಾಂಸ್ಕೃತಿಕ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಐಐಟಿ ಖರಗ್‌ಪುರದಲ್ಲಿ ಮಹಿಳಾ ನಾಯಕತ್ವ ಮತ್ತು ಸಬಲೀಕರಣದ ಕುರಿತು 'ಪ್ಲಾಟಿನಂ ಜುಬಿಲಿ ಫ್ಲ್ಯಾಗ್‌ಶಿಪ್' ಕಾರ್ಯಕ್ರಮವನ್ನು ವರ್ಚುವಲ್ ಆಗಿ ಉದ್ಘಾಟಿಸಲಿದ್ದಾರೆ. ರಾಷ್ಟ್ರಪತಿಗಳು ನಾಳೆ ಡಾರ್ಜಿಲಿಂಗ್‌ನಲ್ಲಿ ಅಂತಾರಾಷ್ಟ್ರೀಯ ಸಂತಾಲ್ ಮಂಡಳಿ ಆಯೋಜಿಸುತ್ತಿರುವ ೯ನೇ ಅಂತಾರಾಷ್ಟ್ರೀಯ ಸಂತಾಲ್ ಸಮ್ಮೇಳನದಲ್ಲಿ ಭಾಗವಹಿಸಲಿದ್ದಾರೆ.

<><><>

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದಿನಿಂದ ನಾಗಾಲ್ಯಾಂಡ್, ಮಿಜೋರಾಂ ಮತ್ತು ತ್ರಿಪುರಾಗಳಿಗೆ ಮೂರು ದಿನಗಳ ಭೇಟಿ ಕೈಗೊಂಡಿದ್ದಾರೆ. ಉಪರಾಷ್ಟ್ರಪತಿಗಳು ಇಂದು ನಾಗಾಲ್ಯಾಂಡ್‌ನ ಲುಮಾಮಿಯಲ್ಲಿ ನಡೆದ ನಾಗಾಲ್ಯಾಂಡ್ ವಿಶ್ವವಿದ್ಯಾಲಯದ ೬ನೇ ಘಟಿಕೋತ್ಸವದಲ್ಲಿ ಭಾಗವಹಿಸಿದ್ದರು. ನಾಳೆ ಅವರು ಮಿಜೋರಾಂನ ಐಜ್ವಾಲ್‌ನಲ್ಲಿರುವ ಮಿಜೋರಾಂ ವಿಶ್ವವಿದ್ಯಾಲಯದ ೨೦ ನೇ ಘಟಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಬಳಿಕ ಉಪರಾಷ್ಟ್ರಪತಿಗಳು ತ್ರಿಪುರಾದ ಅಗರ್ತಲಾದಲ್ಲಿರುವ ತ್ರಿಪುರ ವಿಶ್ವವಿದ್ಯಾಲಯದ ೧೪ ನೇ ಘಟಿಕೋತ್ಸವದಲ್ಲಿ ಭಾಗವಹಿಸಲಿದ್ದಾರೆ. ನಂತರ, ಅವರು ಸ್ವ-ಸಹಾಯ ಗುಂಪು ಮಳಿಗೆಗಳಿಗೆ ಭೇಟಿ ನೀಡಲಿದ್ದಾರೆ ಹಾಗೂ ಹಪಾನಿಯಲ್ಲಿರುವ ಅಂತಾರಾಷ್ಟ್ರೀಯ ವ್ಯಾಪಾರ ಮತ್ತು ಮೇಳ ಕೇಂದ್ರದಲ್ಲಿ ಮಹಿಳಾ ಸ್ವ-ಸಹಾಯ ಸದಸ್ಯರು ಮತ್ತು ಲಖ್‌ಪತಿ ದೀದಿಗಳೊಂದಿಗೆ ಸಂವಾದ ನಡೆಸಲಿದ್ದಾರೆ.

<><><>

ಕರ್ನಾಟಕ ಸರ್ಕಾರದ ಹಣಕಾಸು ಸಚಿವರು ಆಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಂದು ೪.೪೮ ಲಕ್ಷ ಕೋಟಿ ರೂಪಾಯಿ ಮೌಲ್ಯದ ಬಜೆಟ್ ಮಂಡಿಸಿದ್ದಾರೆ. ೨೦೨೬-೨೭ನೇ ಸಾಲಿನಲ್ಲಿ ೩.೫೧ ಲಕ್ಷ ಕೋಟಿ ರೂಪಾಯಿ ರಾಜಸ್ವ ಸಂಗ್ರಹ ಗುರಿ ಹೊಂದಲಾಗಿದೆ. ರಾಜ್ಯ ಸರ್ಕಾರದಲ್ಲಿ ೫೬ ಸಾವಿರದ ೪೩೨ ಖಾಲಿ ಹುದ್ದೆಗಳ ಭರ್ತಿಗೆ ಕ್ರಮ; ಕುವೆಂಪು ವಿಶ್ವವಿದ್ಯಾಲಯದಲ್ಲಿ ಯು.ಆರ್.ಅನಂತಮೂರ್ತಿ ಅಧ್ಯಯನ ಪೀಠ ಸ್ಥಾಪನೆ, ಈಗಿರುವ ೮೦೦ ಶಾಲೆಗಳನ್ನು ಕರ್ನಾಟಕ ಪಬ್ಲಿಕ್ ಶಾಲೆಗಳಾಗಿ ಉನ್ನತೀಕರಣ;  ಬೆಂಗಳೂರಿನಲ್ಲಿ ಒಂದು ಸಾವಿರದ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ೧೫೮ ಕಿಲೋಮೀಟರ್ ರಸ್ತೆ ವೈಟ್ ಟಾಪಿಂಗ್‌ಗೆ ಅನುಮೋದನೆ ನೀಡಲಾಗಿದೆ. ಮುಖ್ಯಮಂತ್ರಿ ಕೃಷಿ ವಿಸ್ತಾರ ಯೋಜನೆ ೧೦೦ ಕೋಟಿ ರೂಪಾಯಿ ಮೀಸಲು; ೮೩ ಲಕ್ಷ ರೈತರಿಗೆ ಶೂನ್ಯ ಬಡ್ಡಿದರಲ್ಲಿ ಸಾಲ, ಕೃಷಿ ಮತ್ತು ತೋಟಗಾರಿಕೆ ವಲಯಕ್ಕೆ ೮ ಸಾವಿರದ ೩೭೩ ಕೋಟಿ ರೂಪಾಯಿ ಅನುದಾನ; ೩೬೩ ಕೋಟಿ ರೂಪಾಯಿ ವೆಚ್ಚದಲ್ಲಿ ಕೃಷಿ ಹೊಂಡ ನಿರ್ಮಾಣ, ಚಿಕ್ಕಮಗಳೂರಿನ ಮುಳ್ಳಯ್ಯನಗಿರಿಯ ಸೀತಾಳ್ಳಯನಗಿರಿಯಿಂದ ಕೈಮರದವರೆಗೆ ಸಾರ್ವಜನಿಕ ಖಾಸಗಿ ಸಹಭಾಗಿತ್ವದಲ್ಲಿ ರೋಪ್ ವೇ ನಿರ್ಮಾಣ ಕುರಿತು ಬಜೆಟ್‌ನಲ್ಲಿ ಘೋಷಿಸಲಾಗಿದೆ. ರಾಜ್ಯದಲ್ಲಿ ಹೊಸ ರೈಲು ಮಾರ್ಗಕ್ಕೆ ೨ ಸಾವಿರದ ೬೮೨ ಕೋಟಿ ರೂಪಾಯಿ ಮೀಸಲು; ಕುಕ್ಕೆ ಸುಬ್ರಹ್ಮಣ್ಯ ಮತ್ತು ಕೊಲ್ಲೂರು ಮೂಕಾಂಬಿಕಾ ದೇವಾಲಯ ಪ್ರಾಧಿಕಾರ ರಚನೆ; ಗೃಹ ಲಕ್ಷ್ಮಿ ಯೋಜನೆಗೆ ೨೮ ಸಾವಿರದ ೬೦೮ ಕೋಟಿ ರೂಪಾಯಿ ಅನುದಾನ ಮೀಸಲಿಡಲಾಗಿದೆ. ವಾರಾಣಸಿಯಲ್ಲಿ ಹೊಸ ಛತ್ರ ನಿರ್ಮಾಣಕ್ಕೆ ಅನುದಾನ; ಮೈಸೂರು ಮತ್ತು ದೊಡ್ಡಬಳ್ಳಾಪುರದಲ್ಲಿ ಪ್ಯಾರಾ ಮೆಡಿಕಲ್ ಕಾಲೇಜು ಸ್ಥಾಪನೆ, ಹುಬ್ಬಳ್ಳಿ - ಧಾರವಾಡ ನಗರದಲ್ಲಿ ೨೦೦ ಕೋಟಿ ರೂಪಾಯಿ ವೆಚ್ಚದಲ್ಲಿ ಕೌಶಲ್ಯ ತರಬೇತಿ ಅಕಾಡೆಮಿ ಸ್ಥಾಪನೆ, ಕಾರ್ಮಿಕರ ಮಕ್ಕಳಿಗಾಗಿ ನೂತನ ೬೨ ವಸತಿ ಶ್ರಮಿಕ ಶಾಲೆ ಸೇರಿ, ಒಟ್ಟು ೧೦೪ ಶಾಲೆಗಳ ಸ್ಥಾಪನೆ ಹಾಗೂ ಇಂದಿರಾ ಆಹಾರ ಕಿಟ್‌ಗೆ ೬ ಸಾವಿರದ ೨೦೦ ಕೋಟಿ ರೂಪಾಯಿಗಳ ಅನುದಾನವನ್ನು ಬಜೆಟ್‌ನಲ್ಲಿ ಮೀಸಲಿಡಲಾಗಿದೆ.

<><><>

ಅಮೆರಿಕ ಮತ್ತು ವೆನಿಜುವೆಲಾ ರಾಜತಾಂತ್ರಿಕ ಸಂಬಂಧಗಳನ್ನು ಪುನರ್ ಸ್ಥಾಪಿಸಲು ಎರಡೂ ದೇಶಗಳು ಒಪ್ಪಿಕೊಂಡಿವೆ ಎಂದು ಅಮೆರಿಕ ವಿದೇಶಾಂಗ ಇಲಾಖೆ ತಿಳಿಸಿದೆ. ವನಿಜುವೆಲಾದ

ಆಂತರಿಕ ವ್ಯವಹಾರಗಳಲ್ಲಿ ಅಮೆರಿಕವು ನಿರಂತರವಾಗಿ ಹಸ್ತಕ್ಷೇಪ ಮಾಡುತ್ತಿದ್ದರಿಂದ, ವೆನಿಜುವೆಲಾದ ೨೦೧೯ರ ಜನವರಿಯಲ್ಲಿ ಅಮೆರಿಕದೊಂದಿಗೆ ರಾಜತಾಂತ್ರಿಕ ಸಂಬಂಧಗಳನ್ನು ಕಡಿದುಕೊಂಡಿತು. ಅದೇ ವರ್ಷದ ವೆನಿಜುವೆಲಾದ, ಅಮೆರಿಕ ರಾಯಭಾರ ಕಚೇರಿಯಿಂದ ಎಲ್ಲಾ ರಾಜತಾಂತ್ರಿಕ ಸಿಬ್ಬಂದಿಯನ್ನು ಹಿಂದಕ್ಕೆ ಕರೆಸಿಕೊಳ್ಳಲಾಯಿತು. ಈ ವರ್ಷದ ಜನವರಿಯಲ್ಲಿ ಅಮೆರಿಕ, ಮಿಲಿಟರಿ ಪಡೆಗಳು ವೆನಿಜುವೆಲಾದಲ್ಲಿ ಕಾರ್ಯಾಚರಣೆ ನಡೆಸಿ, ವೆನಿಜುವೆಲಾ ಅಧ್ಯಕ್ಷ ನಿಕೋಲಾಸ್ ಮಡುರೊ ಮತ್ತು ಅವರ ಪತ್ನಿಯನ್ನು ಬಂಧಿಸಿ, ಅಮೆರಿಕದ ಜೈಲಿನಲ್ಲಿಡಲಾಗಿದೆ. ಆದರೆ, ನಂತರ ಬದಲಾದ ಪರಿಸ್ಥಿತಿಯಲ್ಲಿ ರಾಜತಾಂತ್ರಿಕ ಸಂಬಂಧಸಗಳನ್ನು ಪುನರ್ ಸ್ಥಾಪಿಸಲು ಉಭಯ ದೇಶಗಳು ಒಪ್ಪಿಕೊಂಡಿವೆ.

<><><>

ಜಾಗತಿಕ ದಕ್ಷಿಣ ರಾಷ್ಟ್ರಗಳಿಗೆ ಸ್ಥಿರವಾದ ಕಡಲ ಬೆಳವಣಿಗೆ ಅತ್ಯಗತ್ಯ ಎಂದು ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಕೀರ್ತಿವರ್ಧನ್ ಸಿಂಗ್ ಪ್ರತಿಪಾದಿಸಿದ್ದಾರೆ. ನವದೆಹಲಿಯಲ್ಲಿ ನಡೆಯುತ್ತಿರುವ ರೈಸೀನಾ ಸಂವಾದ ೨೦೨೬ರ ಎರಡನೇ ದಿನವಾದ ಇಂದು ಅಧಿವೇಶನ್ನುದ್ದೇಶಿಸಿ ಮಾತನಾಡಿದ ಸಚಿವರು, ಭಾರತದ ನಿರ್ಧಾರಗಳು ರಾಷ್ಟ್ರೀಯ ಹಿತಾಸಕ್ತಿಗಳಿಂದ ಮಾರ್ಗದರ್ಶಿಸಲ್ಪಟ್ಟಿವೆ ಮತ್ತು ಇದು ಯಾವುದೇ ಒಂದು ಬಣದೊಂದಿಗೆ ಹೊಂದಿಕೆಯಾಗುವುದಿಲ್ಲ ಎಂದು ತಿಳಿಸಿದ್ದಾರೆ. ಸಂಪರ್ಕ ಮತ್ತು ಸ್ಥಿರತೆಯನ್ನು ಉತ್ತೇಜಿಸಲು ಭಾರತ - ಮಧ್ಯಪ್ರಾಚ್ಯ - ಯೂರೋಪ್ ಆರ್ಥಿಕ ಕಾರಿಡಾರ್‌ನಂತಹ ಉಪಕ್ರಮಗಳನ್ನು ಮುನ್ನಡೆಸುವಾಗ ಭಾರತ ನಿರಂತರವಾಗಿ ಸಂವಾದ ಮತ್ತು ರಾಜತಾಂತ್ರಿಕತೆಗೆ ಒತ್ತು ನೀಡುತ್ತದೆ ಎಂದು ಕೀರ್ತಿವರ್ಧನ್ ಸಿಂಗ್ ಹೇಳಿದ್ದಾರೆ.

<><><>

ವಿಕಸಿತ ಭಾರತ ದೃಷ್ಟಿಕೋನವನ್ನು ಸಾಕಾರಗೊಳಿಸುವಲ್ಲಿ ಯುವಕರ ಪಾತ್ರ ಮುಖ್ಯವಾದದ್ದು ಎಂದು ಕೇಂದ್ರ ಕಾರ್ಮಿಕ, ಉದ್ಯೋಗ ಮತ್ತು ಯುವಜನ ವ್ಯವಹಾರ ಮತ್ತು ಕ್ರೀಡಾ ಸಚಿವ ಡಾ. ಮನ್ಸುಖ್ ಮಾಂಡವಿಯಾ ಹೇಳಿದ್ದಾರೆ. ಬೆಂಗಳೂರು ನಗರದ ಬಳ್ಳಾರಿ ರಸ್ತೆಯ ಕಾಂಡಕೋಶ ವಿಜ್ಞಾನ ಮತ್ತು ಪುನರುತ್ಪಾದಕ ಔಷಧ ಸಂಸ್ಥೆ ಸಭಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಮೈ ಭಾರತ್ ಎನ್‌ಎಸ್‌ಎಸ್ ಚಿಂತನ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು. ಬದಲಾಗುತ್ತಿರುವ ಕಾಲಕ್ಕೆ ತಕ್ಕಂತೆ ದೇಶದ ಯುವಕರ ಭವಿಷ್ಯವನ್ನು ರೂಪಿಸಲು ಕೇಂದ್ರ ಯುವಜನ ವ್ಯವಹಾರ ಇಲಾಖೆ

ವತಿಯಿಂದ ಆಯೋಜಿಸಿರುವ ಮೈ ಭಾರತ್ ಎನ್‌ಎಸ್‌ಎಸ್ ಚಿಂತನ ಶಿಬಿರ ಸಹಕಾರಿಯಾಗಿದೆ ಎಂದರು.

**ಧ್ವನಿ : ಮನ್ಸುಖ್ ಮಾಂಡವೀಯ ( ೩೩ ಸೆಕೆಂಡ್‌ಗಳು)**

ಕಾರ್ಯಕ್ರಮದಲ್ಲಿ ಕೇಂದ್ರ ಯುವಜನ ವ್ಯವಹಾರ ಮತ್ತು ಕ್ರೀಡಾ ರಾಜ್ಯ ಸಚಿವೆ ರಕ್ಷಾ ನಿಖಿಲ್ ಖಡ್ಸೆ ಉಪಸ್ಥಿತರಿದ್ದರು.

<><><><>

ಅಸ್ಸಾಂನಲ್ಲಿ ಜೋರ್ಹತ್ ವಾಯುನೆಲೆಯಿಂದ ಸುಮಾರು ೬೦ ಕಿಲೋ ಮೀಟರ್ ದೂರದಲ್ಲಿ ನಿಯಮಿತ ತರಬೇತಿ ಕಾರ್ಯಾಚರಣೆಯ ಸಮಯದಲ್ಲಿ ಸುಖೋಯ್-೩೦ ಎಂಕೆಐ ಯುದ್ಧ ವಿಮಾನ ಅಪಘಾತಕ್ಕೀಡಾಗಿದ್ದು, ಇಬ್ಬರು ಪೈಲಟ್‌ಗಳು ಸಾವನ್ನಪ್ಪಿದ್ದಾರೆ. ಮೃತ ಸ್ಕ್ವಾಡ್ರನ್ ಲೀಡರ್ ಅನುಜ್ ಮತ್ತು ಫ್ಲೈಟ್ ಲೆಫ್ಟಿನೆಂಟ್ ಪೂರ್ವೇಶ್ ದುರಗ್‌ಕರ್ ಅವರ ನಿಧನಕ್ಕೆ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸಂತಾಪ ಸೂಚಿಸಿದ್ದಾರೆ. ಜೋರ್ಹತ್ ವಾಯುನೆಲೆಯಿಂದ ಹೊರಟ ವಿಮಾನವು ನಿನ್ನೆ ಸಂಜೆ ೭:೪೨ ಕ್ಕೆ ರಾಡಾರ್ ಸಂಪರ್ಕವನ್ನು ಕಳೆದುಕೊಂಡಿತ್ತು. ಬೊಕಾಜನ್ ಉಪವಿಭಾಗದ ಜೋಕಿಹೋಲಾ ಗ್ರಾಮದ ಸ್ಥಳೀಯರು, ಅಪಘಾತದ ಸ್ಥಳವನ್ನು ಮೊದಲು ಪತ್ತೆ ಹಚ್ಚಿದರು. ಇಬ್ಬರು ಪೈಲಟ್‌ಗಳ ಮೃತದೇಹಗಳನ್ನು ಗುರುತಿಸಲಾಗಿದೆ.

<><><><>

ಬರ್ಮಿಂಗ್‌ಹ್ಯಾಮ್‌ನಲ್ಲಿ ನಡೆಯುತ್ತಿರುವ ಆಲ್ ಇಂಗ್ಲೆಂಡ್ ಓಪನ್ ಬ್ಯಾಡ್ಮಿಂಟನ್ ಚಾಂಪಿಯನ್‌ಶಿಪ್‌ನ ಪುರುಷರ ಸಿಂಗಲ್ಸ್ ವಿಭಾಗದ ಕ್ವಾರ್ಟರ್ ಫೈನಲ್‌ನಲ್ಲಿಂದು ಭಾರತದ ಲಕ್ಷ್ಯ ಸೇನ್, ಚೀನಾದ ಲಿ ಶಿ ಫೆಂಗ್ ಅವರನ್ನು ಎದುರಿಸಲಿದ್ದಾರೆ. ನಿನ್ನೆ ನಡೆದ ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ವಿಶ್ವದ ೧೨ನೇ ಶ್ರೇಯಾಂಕದ ಲಕ್ಷ್ಯ ಸೇನ್, ಹಾಂಗ್‌ಕಾಂಗ್‌ನ ಎನ್‌ಜಿ ಕಾ ಲಾಂಗ್ ಆಂಗಸ್ ಅವರನ್ನು ೨೧-೧೯, ೨೧-೨೩, ೨೧-೧೦ ಸೆಟ್‌ಗಳಿಂದ ಮಣಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>